ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿಯಲ್ಲಿ ಬೆಳೆ ವಿಮೆ ಪಡೆಯಲು ರೈತರ ಸಂಕಷ್ಟದ ಕುರಿತು

ಶ್ರೀ ಪಿ. ಆರ್. ರಮೇಶ್(ನಾಮನಿರ್ದೇಶನ ಹೊಂದಿದವರು) –

1092 (1151) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ 3 ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ರೈತರು ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಲ್ಲಿ ವಿಮಾ ಕಂತುಗಳನ್ನು ತುಂಬಿದ್ದಾರೆ ಮತ್ತು ಎಷ್ಟು ಮೊತ್ತವನ್ನು ಪಾವತಿಸಿದ್ದಾರೆ; (ಜಿಲ್ಲಾವಾರು, ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ನೀಡುವುದು)

(ಆ) ಕಳೆದ 3 ವರ್ಷಗಳಲ್ಲಿ ತೀವ್ರ ನೆರೆ ಹಾವಳಿ ಮತ್ತು ಆಕಾಲಿಕ ಮಳೆಯಿಂದ ಸಂಪೂರ್ಣ ಬೆಳೆನಾಶವಾಗಿ ಎಷ್ಟು ರೈತರು ಬೆಳೆನಾಶದ ವಿಮೆಗಾಗಿ ಅರ್ಹರಾಗಿರುತ್ತಾರೆ; (ಜಿಲ್ಲಾವಾರು, ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ನೀಡುವುದು)

(ಇ) ವಿಮೆ ಕಂತು ಪಾವತಿಸಿದರೂ ಸಹ ಬೆಳೆದ ಬೆಳೆಯು ನಾಶವಾಗಿ ಸರ್ಕಾರದಿಂದ ಬರತಕ್ಕಂತಹ ವಿಮೆಗಾಗಿ ಅರ್ಜಿ ಸಲ್ಲಿಸಿದರೂ ಸಹಾ ಹಲವು ರೈತರಿಗೆ ವಿಮೆ ಪರಿಹಾರ ದೊರಕದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಕಳೆದ 3 ವರ್ಷಗಳಲ್ಲಿ ಬೆಳೆ ಹಾನಿಯಾಗಿರುವ ರೈತರ ಸಂಖ್ಯೆ ಎಷ್ಟು; ಕೇಂದ್ರ ಸರ್ಕಾರದ ವತಿಯಿಂದ ಬರಬೇಕಾದ ವಿಮೆ ಹಣದ ಮೊತ್ತವೆಷ್ಟು; (ಜಿಲ್ಲಾವಾರು, ತಾಲ್ಲೂಕವಾರು, ಗ್ರಾಮವಾರು ಮಾಹಿತಿ ನೀಡುವುದು)

(ಉ) ಕಳೆದ 3 ವರ್ಷಗಳಲ್ಲಿ ಎಷ್ಟು ರೈತರಿಗೆ ಬೆಳೆ ಹಾನಿಯಾಗಿರುವ ವಿಮೆಯ ಹಣ ಪಾವತಿಯಾಗಿದೆ; ಎಷ್ಟು ರೈತರಿಗೆ ಬಾಕಿ ವಿಮಾ ಹಣ ಬರಬೇಕಾಗಿದೆ; ಈ ಬಗ್ಗೆ ಸರ್ಕಾರದ ಕ್ರಮವೇನು;

(ಊ) ಬೆಳೆ ಬೆಳೆದ ರೈತ ಹಾಗೂ ಕೃಷಿ ಕಂದಾಯ ಇಲಾಖೆಗಳು ಮತ್ತು ಬ್ಯಾಂಕ್‌ಗಳ ನಡುವೆ ಸಮನ್ವಯತೆ ಕೊರತೆಯಿಂದ ಬೆಳೆ ವಿಮಾ ಪರಿಹಾರಕ್ಕೆ ವಿಳಂಬವಾಗುತ್ತಿರುವ ಬಗ್ಗೆ ಸರ್ಕಾರದ ನಿಲುವೇನು? (ವಿವರ ನೀಡುವುದು)